ಸರ್ಕಾರಿ ವಿದ್ಯಾರ್ಥಿ ನಿಲಯದ ವಿದ್ಯಾರ್ಥಿಗಳಿಗೆ ಮಾಸಿಕ ಮೊತ್ತ ಹೆಚ್ಚಿಸುವುದು

916 (1424) ಶ್ರೀ ರಾಜು.ಕೆ. (ರಾಮನಗರ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸರ್ಕಾರದ ವತಿಯಿಂದ ನಡೆಸುತ್ತಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳು ಮತ್ತು ಅಲ್ಪಸಂಖ್ಯಾತರು ಮತ್ತು ಹಿಂದುಳಿದ ವರ್ಗಗಳ ವಿದ್ಯಾರ್ಥಿ ನಿಲಯಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಪ್ರತಿ ತಿಂಗಳು ನೀಡುತ್ತಿರುವ ಮೊತ್ತ ಎಷ್ಟು; (ವಿವರಗಳನ್ನು ನೀಡುವುದು);

ಆ) ಪ್ರಸ್ತುತ ನೀಡುತ್ತಿರುವ ಮೊತ್ತವು ವಿದ್ಯಾರ್ಥಿಗಳಿಗೆ ಸಾಲದೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಈ ಮೊತ್ತವನ್ನು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಈ) ಹಾಗಿದ್ದಲ್ಲಿ, ಎಷ್ಟು ಪ್ರಮಾಣದ ಮೊತ್ತವನ್ನು ಹೆಚ್ಚಿಸಲಾಗುವುದು ಹಾಗೂ ಯಾವ ಸಾಲಿನಿಂದ ಜಾರಿಗೆ ತರಲಾಗುವುದು?

ಶ್ರೀ ಡಿ. ಸುಧಾಕರ್ (ಸಮಾಜ ಕಲ್ಯಾಣ ಸಚಿವರು) :

ಅ) ಸರ್ಕಾರದ ವತಿಯಿಂದ ನಡೆಸುತ್ತಿರುವ ಪರಿಶಿಷ್ಟ ಜಾತಿ ಪರಿಶಿಷ್ಟ ವರ್ಗ ಮತ್ತು ಅಲ್ಪ ಸಂಖ್ಯಾತರು ಮತ್ತು ಹಿಂದುಳಿದ ವರ್ಗಗಳ ವಿದ್ಯಾರ್ಥಿ ನಿಲಯಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮೆಟ್ರಿಕ್ ಪೂರ್ವ ವಿದ್ಯಾರ್ಥಿಗಳಿಗೆ ಮಾಸಿಕ ರೂ.600/– ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ಮಾಸಿಕ ರೂ.650/– ಆಹಾರ ವೆಚ್ಚ ಮಾಡಲಾಗುತ್ತದೆ. ಇದಲ್ಲದೆ, –

6. ಸೋಪು, ಎಣ್ಣೆ, ಪೇಸ್ಟ್ ಇತ್ಯಾದಿ – ಮಾಸಿಕ ರೂ.40/–
7. ಪಥ್ಯ ಪುಸ್ತಕ ಮತ್ತು ಲೇಖನ ಸಾಮಗ್ರಿ(ವಾರ್ಷಿಕ ರೂ.250/–)
8. ಆಯುಷ್ಕರ್ಮ – ವಾರ್ಷಿಕ ರೂ.60/–)
9. ಸಮವಸ್ತ್ರ – ವಾರ್ಷಿಕ ರೂ.500/–
10. ಹಾಸಿಗೆ ಹೊದಿಕೆ – ರೂ.400/–(3 ವರ್ಷಕ್ಕೆ ಒಮ್ಮೆ)

ಆ) ಹೌದು.

ಇ) ಹೌದು.

ಈ) 2010 ಮತ್ತು 2011 ನೇ ಸಾಲಿನಿಂದ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಲ್ಲಿನ ವಿದ್ಯಾರ್ಥಿಗಳ

ಭೋಜನ ವೆಚ್ಚವನ್ನು ಅನುಕ್ರಮವಾಗಿ ಮಾಸಿಕ ರೂ.600/– ರಿಂದ ರೂ.650/–ಕ್ಕೆ ಹಾಗೂ ರೂ.650/– ರಿಂದ ರೂ.750/–ಕ್ಕೆ ಹೆಚ್ಚಿಸಲು ಉದ್ದೇಶಿಸಲಾಗಿದೆ.

ರಾಜೀವ್ ಗಾಂಧಿ ವಿಶ್ವವಿದ್ಯಾನಿಲಯ ಪ್ರಾರಂಭಿಸುವುದು

917 (1425) ಶ್ರೀ ಕೆ. ರಾಜು (ರಾಮನಗರ) : ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜೀವ್ ಗಾಂಧಿ ವಿಶ್ವವಿದ್ಯಾಲಯವನ್ನು ರಾಮನಗರದಲ್ಲಿ ಇದುವರೆವಿಗೂ ಪ್ರಾರಂಭಿಸದೇ ಇರಲು ಕಾರಣಗಳೇನು;

ಆ) ರಾಜೀವ್ ಗಾಂಧಿ ವಿಶ್ವವಿದ್ಯಾಲಯವನ್ನು ಶೀಘ್ರವಾಗಿ ಪ್ರಾಂಭಿಸುವುದರಿಂದ ಸ್ಥಳೀಯರಿಗೆ ಉದ್ಯೋಗಾವಕಾಶ ಲಭಿಸುವುದಿಲ್ಲವೇ;

ಇ) ಹಾಗಿದ್ದಲ್ಲಿ, ವಿಳಂಬಕ್ಕೆ ಕಾರಣಗಳೇನು?

ಶ್ರೀ ರಾಮಚಂದ್ರಗೌಡ (ವೈದ್ಯಕೀಯ ಶಿಕ್ಷಣ ಸಚಿವರು) :

ಅ) ಭೂ ಸ್ವಾಧೀನ ಪ್ರಕ್ರಿಯೆ ಪೂರ್ಣಗೊಳ್ಳದಿರುವುದು.

ಆ) ಲಭಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಬೆಂಗಳೂರು ನಗರದಲ್ಲಿ ಬಸ್ ದಿನಾಚರಣೆ

918 (406) ಶ್ರೀ ರಾಮಲಿಂಗಾರೆಡ್ಡಿ (ಬಿ.ಟಿ.ಎಂ. ಲೇಔಟ್) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ನಗರದಲ್ಲಿ ಪ್ರತಿ ತಿಂಗಳು ಒಂದು ದಿನ ಬಸ್ ದಿನಾಚರಣೆ ಆಚರಿಸಲಾಗುತ್ತಿದೆಯೇ;

ಆ) ಹಾಗಿದ್ದಲ್ಲಿ, ಪ್ರತಿ ತಿಂಗಳು ಯಾವ ದಿನಾಂಕದಂದು ಆಚರಿಸಲಾಗುವುದು;

ಇ) ಈ ಬಸ್ ದಿನಾಚರಣೆ ಆಚರಿಸುವ ಉದ್ದೇಶವೇನು;

ಈ) ಈ ಬಸ್ ದಿನಾಚರಣೆಯಂದು ಎಲ್ಲಾ ಸರ್ಕಾರಿ ಅಧಿಕಾರಿಗಳು, ನೌಕರರು ಹಾಗೂ ಮಾಹಿತಿ ತಂತ್ರಜ್ಞಾನ ಸಂಸ್ಥೆಗಳು ಸಿಬ್ಬಂದಿ ಕಡ್ಡಾಯವಾಗಿ ಬಸ್‌ಗಳಲ್ಲಿ ಸಂಚರಿಸುವ ನಿಯಮ ಹಾಕಲಾಗಿದೆಯೇ;

ಉ) ಈ ಬಸ್ ದಿನಾಚರಣೆಯ ದಿನ ಹೆಚ್ಚು ಬಸ್‌ಗಳನ್ನು ಓಡಿಸಲಾಗುವುದೇ, ದರವನ್ನು ಕಡಿತಗೊಳಿಸಲಾಗಿದೆಯೇ;